**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ವಾದಿ ಪರವಾಗಿ ಶ್ರೀ HGH ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ದಾವೆಗೆ ಪೂರಕವಾಗಿ ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳಲ್ಲಿರುವ ಸ.ನಂ. 21/*/1 ರ ಒಂದು ಪುಟದಲ್ಲಿರುವ ಪಹಣಿ ಪತ್ರಿಕೆಯನ್ನು ನಿಪಿ 1 ಎಂದು, ಸರ್ವೆ ನಂ. 21/1 ರ ಎರಡು ಪುಟದಲ್ಲಿರುವ ಕೈಬರಹ ಪಹಣಿ ಪತ್ರಿಕೆಯ ದೃಢಿಕೃತ ನಕಲನ್ನು ನಿಪಿ 2 ಎಂದು, ದಿನಾಂಕ 05-08-2021ರ ಪತ್ರವನ್ನು ನಿಪಿ-3 ಎಂದು, ದಿನಾಂಕ 09-09-2021ರ ಪತ್ರವನ್ನು ನಿಪಿ-4 ಎಂದು, ದಿನಾಂಕ 13-09-2021ರ ಪತ್ರವನ್ನು ನಿಪಿ-5 ಎಂದು, ದಿನಾಂಕ 22-10-2021ರ ಕಾನೂನು ಬದ್ಧ ನೋಟಿಸನ್ನು ನಿಪಿ-6 ಎಂದು, ದಿನಾಂಕ 10-11-2021ರ ಕಾನೂನು ಬದ್ದ ನೋಟಿಸಗೆ ನೀಡಿರುವ ಉತ್ತರವನ್ನು ನಿಪಿ-7 ಎಂದು ಮತ್ತು ಎರಡು ಭಾವಚಿತ್ರಗಳನ್ನು ನಿಪಿ-8 ಮತ್ತು 9 ಎಂದು ಗುರುತಿಸಲಾಯಿತು.

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ..

**ಪಾಟೀ ಸವಾಲು ಪ್ರತಿವಾದಿ ಪರವಾಗಿ ಶ್ರೀ NCH ವಕೀಲರು ಸಮಯ ಕೋರಿದ್ದರಿಂದ ಸಮಯ ನೀಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**